ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER : ಪ್ರಜಾವಾಣಿ        ದಿನಾಂಕ : DATE : 23/03/2019

# ಸಚಿವ ಶಿವಳ್ಳಿ ಹಠಾತ್ ನಿಧನ

ಹುಬ್ಬಳ್ಳಿ: ಪೌರಾಡಳಿತ ಸಚಿವ ಸಿ.ಎಸ್. ಶಿವಳ್ಳಿ (57) ಶುಕ್ರವಾರ ಮಧ್ಯಾಹ್ನ ತೀವ್ರ ಹೃದಯಾಘಾತದಿಂದ ಹಠಾತ್ ನಿಧನರಾದರು.



ಸಿ.ಎಸ್.ಶಿವಳ್ಳಿ

ಅವರಿಗೆ ಪತ್ನಿ, ಇಬ್ಬರು ಪುತ್ರಿಯರು, ಒಬ್ಬ ಪುತ್ರ ಇದ್ದಾರೆ. ಕುಂದಗೋಳ ತಾಲ್ಲೂಕಿನ ಯರಗುಪ್ಪಿಯಲ್ಲಿ ಶನಿವಾರ ಅಂತ್ಯಕ್ರಿಯೆ ನಡೆಯಲಿದೆ.

ಕುಂದಗೋಳ ಕ್ಷೇತ್ರದಿಂದ 3 ಬಾರಿ ಚುನಾಯಿತರಾಗಿದ್ದ ಅವರು ಡಿಸೆಂಬರ್‌ನಲ್ಲಿ ಎಚ್.ಡಿ.ಕುಮಾರಸ್ವಾಮಿ ಸಂಪುಟದಲ್ಲಿ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದ್ದರು. ಸಿದ್ದರಾಮಯ್ಯ, ಮುಖ್ಯಮಂತ್ರಿಯಾಗಿದ್ದಾಗ ಸಂಸದೀಯ ಕಾರ್ಯದರ್ಶಿಯಾಗಿ ಕಾರ್ಯನಿರ್ವಹಿಸಿದ್ದರು.

ಕುಂದಗೋಳದಲ್ಲಿ ಡಾ.ರಾಜಕುಮಾರ್ ಅಭಿಮಾನಿಗಳ ಸಂಘ ಕಟ್ಟಿ, ಅದರ ಅಧ್ಯಕ್ಷರಾಗಿದ್ದರು. ಬಳಿಕ ಎಸ್. ಬಂಗಾರಪ್ಪ ನೇತೃತ್ವದ ಕೆಸಿಪಿ ಮೂಲಕ ರಾಜಕೀಯ ಪ್ರವೇಶಿಸಿದ್ದರು.

2